For more job news visit : www.kpscvaani.com

ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ

(ಕರ್ನಾಟಕ ಸರ್ಕಾರದ ಸಂಪೂರ್ಣ ಸ್ವಾಮ್ಯಕ್ಕೆ ಒಳಪಟ್ಟಿದೆ)

ಕಂಪನಿ ಕಾರ್ಯಾಲಯ, ಕೆ.ಆರ್ ವೃತ್ತ, ಬೆಂಗಳೂರು-560001

ಸಂಖ್ಯೆ: ಬೆವಿಕಂ/ಪ್ರವ್ಯ(ಆ&ಮಾಸಂ)/ಬಿಸಿ-50/2524/2024-25/ ದಿನಾಂಕ: 11.03.2026

ಅಧಿಸೂಚನೆ- ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಣೆ

ವಿಷಯ: ಬೆವಿಕಂನಲ್ಲಿ ಕಿರಿಯ ಪವರ್‌ಮ್ಯಾನ್ (ಎನ್.ಕೆ.ಕೆ/ ಕೆ.ಕೆ) ಹುದ್ದೆಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ: 1. ನಿಗಮದ ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/44953/2023-24(NKK/KK), ದಿನಾಂಕ: 14.10.2024.

2. ದಾಖಲಾತಿ ಪರಿಶೀಲನೆಗೆ ಹೊರಡಿಸಲಾದ ಅಧಿಸೂಚನೆ ಸಂಖ್ಯೆ: ಬೆವಿಕಂ/ಪ್ರವ್ಯ(ಆ&ಮಾಸಂ)/ಬಿಸಿ-50/2524/2024-25, ದಿನಾಂಕ: 25.02.2025 ಮತ್ತು 11.03.2025.

3. ಸಹನ ಶಕ್ತಿ ಪರೀಕ್ಷೆ ಅಧಿಸೂಚನೆ ಸಂಖ್ಯೆ: ಬೆವಿಕಂ/ ಪ್ರವ್ಯ(ಆ&ಮಾಸಂ)/ಬಿಸಿ-50/2524/2024-25, ದಿನಾಂಕ: 31.05.2025

*****

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/44953/2023-24(NKK/KK), ದಿನಾಂಕ: 14.10.2024 ಕ್ಕೆ ಅನುಗುಣವಾಗಿ, ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ (ಎಸ್.ಎಸ್.ಎಲ್.ಸಿ/10ನೇ ತರಗತಿ) ಗಳಿಸಿರುವ ಅಂಕಗಳ ಜೇಷ್ಠತೆಯ ಆಧಾರದ ಮೇಲೆ, ದಿನಾಂಕ: 09.06.2025 ರಿಂದ 12.06.2025 ರವರೆಗೆ ಅಧಿಸೂಚಿತ ಹುದ್ದೆಗಳ 1:5 ರ ಅನುಪಾತದಲ್ಲಿ ನಡೆಸಲಾದ ಸಹನ ಶಕ್ತಿ ಪರೀಕ್ಷೆಯಲ್ಲಿ ಕಿರಿಯ ಪವರ್‌ಮ್ಯಾನ್(ಎನ್.ಕೆ.ಕೆ/ಕೆ.ಕೆ) ಹುದ್ದೆಗಳಿಗೆ ಅರ್ಹರಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು (Cut-off) ಅಂಕಗಳೊಂದಿಗೆ ಬೆವಿಕಂ ಅಂತರ್ಜಾಲ https://bescom.karnataka.gov.in/Recruitment , ರಲ್ಲಿ ಈ ಮೂಲಕ ಪ್ರಕಟಿಸಲಾಗಿದೆ.

ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಮಂಜಸವಾದ ಆಕ್ಷೇಪಣೆಗಳಿದ್ದಲ್ಲಿ, ಸಹನ ಶಕ್ತಿ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ್ದ ಅಭ್ಯರ್ಥಿಗಳು ಮಾತ್ರ ಸೂಕ್ತ ವಿವರ ಹಾಗೂ ದಾಖಲಾತಿಗಳೊಂದಿಗೆ, ವಿಷಯಸೂಚಿಯಲ್ಲಿ "**ಕಿರಿಯ ಪವರ್‌ಮ್ಯಾನ್ (ಎನ್.ಕೆ.ಕೆ)/ ಕಿರಿಯ ಪವರ್‌ಮ್ಯಾನ್ (ಕೆ.ಕೆ)-ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ**' ಎಂದು ಕಡ್ಡಾಯವಾಗಿ ನಮೂದಿಸಿ, ತಮ್ಮ ಹೆಸರು ಹಾಗೂ ಅರ್ಜಿ ಸಂಖ್ಯೆಯೊಂದಿಗೆ ಖುದ್ದಾಗಿ **ಪ್ರಧಾನ ವ್ಯವಸ್ಥಾಪಕರು(ಆಡಳಿತ ಮತ್ತು ಮಾಸಂ), ಬೆಳಕು ಭವನ, ಕಂಪನಿ ಕಾರ್ಯಾಲಯ, ಕೆ.ಆರ್ ವೃತ್ತ, ಬೆವಿಕಂ, ಬೆಂಗಳೂರು-560001** ಇವರಿಗೆ ಸಲ್ಲಿಸುವುದು. ಆಕ್ಷೇಪಣೆಗಳನ್ನು **ದಿನಾಂಕ: 25.03.2025 ರ ಸಂಜೆ 05:30 ರವರೆಗೆ** ಮಾತ್ರ ಸಲ್ಲಿಸಬಹುದಾಗಿರುತ್ತದೆ.

ನಿಗದಿತ ದಿನಾಂಕದ ನಂತರ ಸಲ್ಲಿಸಲಾಗುವ ಆಕ್ಷೇಪಣೆಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.

ಈ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಇತ್ಯರ್ಥಕ್ಕಾಗಿ ಬಾಕಿ ಉಳಿದಿರುವ ರಿಟ್ ಅರ್ಜಿ ಸಂಖ್ಯೆ: 200448/2025 ರಲ್ಲಿನ ಅಂತಿಮ ತೀರ್ಪಿಗೊಳಪಟ್ಟು ಪ್ರಕಟಿಸಲಾಗಿದೆ.

Dayanand

ಪ್ರಧಾನ ವ್ಯವಸ್ಥಾಪಕರು (ಆ & ಮಾ.ಸಂ.)

ಬೆವಿಕಂ

11/3/26